ಕ್ರ. ಸಂ.	ಜಿಲ್ಲೆಯ ಹೆಸರು	ತಾಲ್ಲೂಕು	ವಸತಿ ಶಾಲೆಗಳ ಸ್ಥಳ ವಿವರ
4.	ಮೈಸೂರು	ಹುಣಸೂರು	ಹುಣಸೂರು
5.	ಮೈಸೂರು	ಪಿರಿಯಾಪಟ್ಟಣ	ಪಿರಿಯಾಪಟ್ಟಣ
6.	ಚಿತ್ರದುರ್ಗ	ಮೊಳಕಾಲ್ಮೂರು	ಮೊಳಕಾಲ್ಮೂರು
7.		ಹೊಳಲ್ಕರೆ	ಹೊಳಲ್ಕರೆ
8.	ರಾಯಚೂರು	ಮಾನ್ವಿ	ಕವಿತಾಳ
9.		ಸಿಂಧನೂರು	ಸಿಂಧನೂರು
10.	ತುಮಕೂರು	ಕೊರಟಗೆರೆ	ಕೊರಟಗೆರೆ
11.	ಕೋಲಾರ	ಶಿಡ್ಲಘಟ್ಟ	ಶಿಡ್ಲಘಟ್ಟ
12.	ಬೆಂಗಳೂರು ಗ್ರಾಮಾಂತರ	ದೇವನಹಳ್ಳಿ	ದೇವನಹಳ್ಳಿ
13.	ಚಿಕ್ಕಮಗಳೂರು	ಕಡೂರು	ಬೀರೂರು (ಸಿಂದಿಗೆರೆ)
14.	ರಾಯಚೂರು	ರಾಯಚೂರು	ರಾಯಚೂರು

84 (194) ಶ್ರೀ ಮಲ್ಲಿಕಾರ್ಜುನ ಸಿದ್ರಾಮಪ್ಪ ಖೂಬಾ (ಬಸವಕಲ್ಯಾಣ) : ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ರಾಜ್ಯದ ಯಾವ ಯಾವ ಸ್ಥಳಗಳಲ್ಲಿ ಹೊಸದಾಗಿ ವೈದ್ಯಕೀಯ ಕಾಲೇಜುಗಳನ್ನು ಸ್ಥಾಪಿಸಲು ಮಂಜೂರಾತಿ ನೀಡಿದೆ;

ಆ) ಈ ವೈಕಿ ಯಾವ ಯಾವ ಸ್ಥಳಗಳಲ್ಲಿ ಸ್ಥಾಪನೆಯ ಕೆಲಸಗಳು ಪ್ರಗತಿಯಲ್ಲಿವೆ;

ಇ) ಬೀದರ್‌ನಲ್ಲಿ ಸ್ಥಾಪಿಸಲಾಗುತ್ತಿರುವ ವೈದ್ಯಕೀಯ ಕಾಲೇಜಿನ ಕಟ್ಟಡದ ಕೆಲಸ, ವೈದ್ಯ ಸಿಬ್ಬಂದಿ, ನೇಮಕಾತಿಗಳು ಯಾವ ಹಂತದಲ್ಲಿದೆ;

ಈ) ಈ ನೇಮಕಾತಿ ಮಾಡಿಕೊಂಡಿರುವ ಸಿಬ್ಬಂದಿಯ ಆಯ್ಕೆಗೆ ಅನುಸರಿಸಿದ ಮಾನದಂಡಗಳೇನು; (ವಿವರ ಒದಗಿಸುವುದು)

ಉ) ಈ ವೈದ್ಯಕೀಯ ಕಾಲೇಜಿನ ಸ್ಥಾಪನೆಯ ಸಂಬಂಧವಾಗಿ ಸರ್ಕಾರದಿಂದ ಮಂಜೂರಾಗಿರುವ ಹಣದ ಮೊತ್ತವೆಷ್ಟು ಹಾಗೂ ಇಲ್ಲಿಯವರೆವಿಗೆ ವೆಚ್ಚವಾಗಿರುವ ಹಣದ ವಿವರಗಳೇನು;

ಊ) ಬರುವ ಶೈಕ್ಷಣಿಕ ಸಾಲಿನಿಂದ ಬೀದರ್ ವೈದ್ಯಕೀಯ ಕಾಲೇಜು ಪ್ರಾರಂಭ ವಾಗಲಿದೆಯೇ;

ಋ) ಇಲ್ಲದಿದ್ದಲ್ಲಿ ಕಾರಣಗಳೇನು?

ಡಾ: ವಿ.ಎಸ್. ಆಚಾರ್ಯ (ವೈದ್ಯಕೀಯ ಶಿಕ್ಷಣ ಸಚಿವರು):

ಅ) ಬೀದರ್, ರಾಯಚೂರು, ಶಿವಮೊಗ್ಗ, ಬೆಳಗಾಂ, ಹಾಸನ ಮತ್ತು ಮಂಡ್ಯ ಜಿಲ್ಲೆಗಳಲ್ಲಿ ಆರು ಹೊಸ ಕಾಲೇಜುಗಳನ್ನು ಸ್ಥಾಪನೆ ಮಾಡಲು ಸರ್ಕಾರದ ದಿನಾಂಕ: 22-01-2005 ಸಂಖ್ಯೆ: ಆಕುಕ 516 ಎಂಪಿಎಸ್ 05 ರಲ್ಲಿ ಮಂಜೂರಾತಿ ನೀಡಿದೆ.

ಆ) ಆರು ವೈದ್ಯಕೀಯ ಕಾಲೇಜುಗಳ ಸ್ಥಾಪನೆ ಕಟ್ಟಡ ಕಾಮಗಾರಿ ಕೆಲಸಗಳು ಪ್ರಗತಿಯಲ್ಲಿವೆ.

ಇ) ಬೀದರ್‌ನಲ್ಲಿ ಸ್ಥಾಪಿಸಲಾಗುತ್ತಿರುವ ವೈದ್ಯಕೀಯ ಕಾಲೇಜು ಕಟ್ಟಡದ ಬೇಸ್‌ಮೆಂಟ್ ಪ್ಲೋರಿಂಗ್ ಸ್ಲ್ಯಾಬ್ ಮತ್ತು ಕಾಲಂ ಕೆಲಸ ಪ್ರಗತಿಯಲ್ಲಿದೆ. ಉಪನ್ಯಾಸಕರು ಮತ್ತು ಇತರೆ ಸಿಬ್ಬಂದಿ ವರ್ಗದವರನ್ನು ವಾಕ್ ಇನ್ ಸಂದರ್ಶನವನ್ನು ಮಾಡಲಾಗಿದ್ದು, ಕೆಲವು ಬೋಧಕ ವರ್ಗದ ಸಿಬ್ಬಂದಿಯನ್ನು ನೇಮಕ ಮಾಡಲಾಗಿದೆ.

ಈ) ವಾಕ್ ಇನ್ ಸಂದರ್ಶನದ ಮುಖಾಂತರ ಬೋಧಕ ಸಿಬ್ಬಂದಿಯ ಅರ್ಹತೆ ಮತ್ತು ಅನುಭವ ಪ್ರಕಾರ ಹಾಗೂ ಎಂ.ಸಿ.ಐ. ನಿಯಮಗಳ ಅನುಗುಣವಾಗಿ ನೇಮಕಾತಿ ಮಾಡಲಾಗಿದೆ.

ಉ) ಬೀದರ್ ವೈದ್ಯಕೀಯ ಮಹಾವಿದ್ಯಾಲಯದ ಕಟ್ಟಡದ ನಿರ್ಮಾಣಕ್ಕೆ ಸರ್ಕಾರದಿಂದ ಐದು ಕೋಟಿ ಮಂಜೂರು ಮಾಡಲಾಗಿದ್ದು, ಅದರಲ್ಲಿ 4.60 ಕೋಟಿ ರೂ.ಗಳು ವೆಚ್ಚವಾಗಿರುತ್ತದೆ.

ಊ) MCI ರವರ ತೀರ್ಮಾನಕ್ಕೆ ಒಳಪಟ್ಟಿರುತ್ತದೆ.

ಋ) ದಿನಾಂಕ: 31-05-2006 ರೊಳಗಾಗಿ ಕಟ್ಟಡದ ಕಾಮಗಾರಿಯು ಪೂರ್ಣಗೊಳ್ಳಬೇಕಾಗಿದೆ. MCI ನಿಯಮಾವಳಿಯಂತೆ ಅರ್ಹ ಸಿಬ್ಬಂದಿಯ ಅಲಭ್ಯತೆಯೇ ಮುಖ್ಯ ಸಮಸ್ಯೆಯಾಗಿರುತ್ತದೆ.

85 (195) ಶ್ರೀ ಮಲ್ಲಿಕಾರ್ಜುನ ಸಿದ್ರಾಮಪ್ಪ ಖೂಬಾ (ಬಸವಕಲ್ಯಾಣ) : ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಬೀದರ್ ಜಿಲ್ಲೆಯಲ್ಲಿರುವ ಆಶ್ರಮ ಶಾಲೆಗಳ ಸಂಖ್ಯೆ ಎಷ್ಟು: (ವಿಧಾನಸಭಾ ಕ್ಷೇತ್ರವಾರು ವಿವರಗಳನ್ನು ಒದಗಿಸುವುದು)

ಆ) ಜಿಲ್ಲೆಯ ಯಾವ ಯಾವ ಸ್ಥಳಗಳಲ್ಲಿ ಹೊಸದಾಗಿ ಆಶ್ರಮ ಶಾಲೆಗಳನ್ನು ಪ್ರಾರಂಭಿಸಲಾಗುವುದು:

ಇ) ಬಸವಕಲ್ಯಾಣದ ಬೇಡರವಾಡಿಯಲ್ಲಿ ಸ್ಥಾಪಿಸಲಾಗುತ್ತಿರುವ ಆಶ್ರಮ ಶಾಲೆಗೆ ಯಾವಾಗ ಮಂಜೂರಾತಿಯನ್ನು ನೀಡಲಾಯಿತು; ಹಾಗೂ ಇದಕ್ಕಾಗಿ ಇಲ್ಲಿಯವರೆಗೆ ಎಷ್ಟು ಹಣವನ್ನು ವೆಚ್ಚ ಮಾಡಲಾಗಿದೆ; ಹಾಗೂ ಕಟ್ಟಡದ ನಿರ್ಮಾಣ ಕಾರ್ಯ ಯಾವ ಹಂತದಲ್ಲಿ ಇದೆ:

ಈ) ಸದರಿ ಆಶ್ರಮ ಶಾಲೆಯ ಕಟ್ಟಡವು ಇನ್ನೂ ನಿರ್ಮಾಣ ಹಂತದಲ್ಲಿರುವಾಗಲೇ ಶಿಥಿಲವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ:

ಉ) ಈ ಕಟ್ಟಡದ ನಿರ್ಮಾಣ ಕಾರ್ಯವನ್ನು ಯಾರಿಗೆ ವಹಿಸಿಕೊಡಲಾಗಿದೆ: ಹಾಗೂ ಇಂತಹ ಕಾಮಗಾರಿಯನ್ನು ಕೈಗೊಂಡವರ ವಿರುದ್ಧ ಯಾವ ಕ್ರಮವನ್ನು ಕೈಗೊಳ್ಳಲಾಗುವುದು:

ಊ) ವಿದ್ಯಾರ್ಥಿಗಳ ಹಿತದೃಷ್ಟಿಯನ್ನು ಗಮನದಲ್ಲಿಟ್ಟುಕೊಂಡು ಆದಷ್ಟು ಶೀಘ್ರವಾಗಿ ಈ ಆಶ್ರಮ ಶಾಲೆಯನ್ನು ಪ್ರಾರಂಭಿಸಲು ಸರ್ಕಾರ ಯಾವ ಕ್ರಮವನ್ನು ಕೈಗೊಳ್ಳಲಾಗುವುದು?

ಶ್ರೀ ಬಾಲಚಂದ್ರ ಎಲ್. ಜಾರಕಿಹೊಳಿ (ಸಮಾಜ ಕಲ್ಯಾಣ ಸಚಿವರು):

ಅ) ಸಮಾಜ ಕಲ್ಯಾಣ ಇಲಾಖೆಯ ಪರಿಶಿಷ್ಟ ಜಾತಿಯ ವಿದ್ಯಾರ್ಥಿಗಳಿಗೆ ಆಶ್ರಮ ಶಾಲೆಗಳನ್ನು ನಡೆಸುತ್ತಿರುವುದಿಲ್ಲ. ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖಾ ವತಿಯಿಂದ ಬೀದರ್ ಜಿಲ್ಲೆಯ ಬೀದರ್ ನಗರದಲ್ಲಿ 50 ಸಂಖ್ಯಾಬಲದ 1 ಆಶ್ರಮ ಶಾಲೆಯು ಸ್ವಂತ ಕಟ್ಟಡದಲ್ಲಿ